**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾ ಯಿಕ**
**ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು**

**ಸಿ.ಸಿ. ಸಂಖ್ಯೆಃ 2471/2022**

| | | |
|---|---|---|
| ಫಿರ್ಯಾದುದಾರರು | : | ಶ್ರೀ ನಾಗರಾಜು ಬಿನ್ ಶ್ರೀ ಶಿವಪ್ಪ,<br>ವಯಸ್ಸು 52 ವರ್ಷಗಳು,<br>ವಾಸಃ ಬನ್ನಿಕುಪ್ಪೆ ಗ್ರಾಮ,<br>ಕಸಬಾ ಹೋಬಳಿ,<br>ಹುಣಸೂರು ತಾಲ್ಲೂಕು,<br>ಮೈಸೂರು ಜಿಲ್ಲೆ. |
| | | ವಿರುದ್ಧ, |
| ಆರೋಪಿ/ಗಳು | : | ಸುಭಾಷ್ ಬಿ. ಎಸ್. ಬಿನ್ ಸ್ವಾಮಿ ಪಿ.<br>ವಯಸ್ಸು ಸುಮಾರು 32 ವರ್ಷಗಳು,<br>ವಾಸಃ ಬನ್ನಿಕುಪ್ಪೆ ಗ್ರಾಮ,<br>ಕಸಬಾ ಹೋಬಳಿ,<br>ಹುಣಸೂರು ತಾಲ್ಲೂಕು,<br>ಮೈಸೂರು ಜಿಲ್ಲೆ. |

**ದಂಡ ಪ್ರಕ್ರಿಯಾ ಸಂಹಿತೆ ಕಲಂ 313 ರ ರೀತ್ಯಾ ಆರೋಪಿಯ ಹೇಳಿಕೆ**

**ಪ್ರಶ್ನೆ 1:** ಪ್ರಾಸಾ-1 ನಾಗರಾಜು ಇವರು ತಮ್ಮ ಸಾಕ್ಷ್ಯದಲ್ಲಿ, ಆರೋಪಿಯಾದ ನೀವು ಮತ್ತು ನಿಮ್ಮ ತಂದೆಯವರು, ಫಿರ್ಯಾದುದಾರರಿಂದ ನಿಮ್ಮ ಗೃಹಕೃತ್ಯದ ಖರ್ಚಿಗಾಗಿ ಹಾಗೂ ನಿಮ್ಮ ಸಹೋದರನ ಮದುವೆಗೆ ಮಾಡಿರುವ ಸಾಲ ತೀರುವಳಿ ಮಾಡುವ ಸಲುವಾಗಿ ದಿನಾಂಕಃ 22.03.2021 ರಂದು ರೂ.5,00,000/- ಹಣವನ್ನು ಸಾಲವಾಗಿ ಪಡೆದು, ಸದರಿ ಸಾಲವನ್ನು ಮೂರು ತಿಂಗಳೊಳಗೆ ಮರುಪಾವತಿಸಲು ಒಪ್ಪಿಕೊಂಡು ಮತ್ತು ಸದರಿ ಸಾಲದ ಹಣವನ್ನು ಮರುಪಾವತಿಸಲು, 09.02.2022 ರ ದಿನಾಂಕ ಇರುವ ರೂ.5,00,000/-ರ ಫೆಡರಲ್ ಬ್ಯಾಂಕ್, ಹುಣಸೂರು ಶಾಖೆಯ ಚೆಕ್ ಸಂಖ್ಯೆ - 030977 ಅನ್ನು ನೀಡಿರುತ್ತೀರಿ ಎಂದು ಸಾಕ್ಷ್ಯ ನುಡಿದಿರುತ್ತಾರೆ ಇದಕ್ಕೆ ನೀವು ಏನು ಹೇಳುವಿರಿ?

**ಉತ್ತರಃ**

**ಪ್ರಶ್ನೆ 2:** ಪ್ರಾಸಾ-1 ರವರು ತಮ್ಮ ಮುಂದುವರೆದ ಸಾಕ್ಷ್ಯದಲ್ಲಿ, ಸದರಿ ಚೆಕ್ಕನ್ನು ಫಿರ್ಯಾದುದಾರರು ತಮ್ಮ ಬ್ಯಾಂಕ್ ಖಾತೆ ಇರುವ ಕರ್ನಾಟಕ ಬ್ಯಾಂಕ್, ಹುಣಸೂರು ತಾಲ್ಲೂಕಿನ ಬಿಳಿಕೆರೆ ಶಾಖೆಗೆ ನಗಧೀಕರಣಕ್ಕಾಗಿ ಹಾಜರುಪಡಿಸಿದಾಗ, ಸದರಿ ಚೆಕ್ಕು ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿಲ್ಲ "Funds Insufficient" ಎಂಬ ಹಿಂಬರಹದೊಂದಿಗೆ ಮಾನ್ಯವಾಗದೆ ದಿಃ 15.02.2022 ರಂದು ವಾಪಾಸಾಗಿರುತ್ತದೆ ಎಂದು ಸಾಕ್ಷ್ಯ ನುಡಿದಿರುತ್ತಾರೆ ಇದಕ್ಕೆ ನೀವು ಏನು ಹೇಳುವಿರಿ?

**ಉತ್ತರಃ**

**ಪ್ರಶ್ನೆ 3:** ಪ್ರಾಸಾ-1 ರವರು ತಮ್ಮ ಮುಂದುವರೆದ ಸಾಕ್ಷ್ಯದಲ್ಲಿ, ಆದ್ದರಿಂದ ಫಿರ್ಯಾದುದಾರರು ತಮ್ಮ ವಕೀಲರ ಮುಖಾಂತರ ದಿಃ 19.02.2022 ರಂದು ನೊಂದಾಯಿತ ಅಂಚೆ ಮೂಲಕ ನೊಟೀಸನ್ನು ಕಳುಹಿಸಿದ್ದು, ಸದರಿ ನೋಟೀಸ್ ನಿಮಗೆ ಜಾರಿಯಾಗಿದ್ದರೂ ಸಹ ನೀವು ಇದುವರೆವಿಗೂ ಫಿರ್ಯಾದುದಾರರಿಗೆ ಚೆಕ್ಕಿನಲ್ಲಿ ನಮೂದಿಸಿದ ಹಣವನ್ನಾಗಲೀ ಅಥವಾ ಸದರಿ ನೋಟೀಸಿಗೆ ಪ್ರತ್ಯುತ್ತರವನ್ನಾಗಲೀ ನೀಡದೆ ಆರೋಪಿಯಾದ ನೀವು ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣ ಇಲ್ಲದಿದ್ದರೂ ಪ್ರಾಸಾ-1 ಅವರಿಗೆ ಮೋಸ ಮಾಡುವ ದುರುದ್ದೇಶದಿಂದ ಚೆಕ್ಕನ್ನು ನೀಡಿದ್ದು, ಸದರಿ ಕೃತ್ಯವು ನೆಗೋಷಿಯಬಲ್ ಇನ್ಸ್ಟ್ರುಮೆಂಟ್ ಕಾಯಿದೆ ಕಲಂ 138 ರ ರೀತ್ಯಾ ಶಿಕ್ಷಾರ್ಹ ಅಪರಾಧವಾಗಿರುತ್ತದೆ ಎಂದು ಸಾಕ್ಷ್ಯ ನುಡಿದಿರುತ್ತಾರೆ ಇದಕ್ಕೆ ನೀವು ಏನು ಹೇಳುವಿರಿ?

**ಉತ್ತರಃ**

**ಪ್ರಶ್ನೆ 4:** ನಿಮ್ಮ ಪರ ಸಾಕ್ಷಿಗಳಿವೆಯೇ?

**ಉತ್ತರಃ**

**ಪ್ರಶ್ನೆ 5:** ನೀವು ಹೆಚ್ಚಿಗೆ ಹೇಳುವುದು ಏನಾದರೂ ಇದೆಯೆ?

**ಉತ್ತರಃ**

(ಮೇಲ್ಕಂಡ ಸಾಕ್ಷ್ಯದಾರರ ಹೇಳಿಕೆಗಳನ್ನು ತೆರೆದ ನ್ಯಾಯಾಲಯದಲ್ಲಿ ಒದಿ ಹೇಳಿದ್ದು, ಆರೋಪಿಯು ಕೊಟ್ಟ ಉತ್ತರವನ್ನು ಹಾಗೆಯೇ ದಾಖಲಿಸಿಕೊಳ್ಳಲಾಗಿದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ.)

**(ನಮ್ರುತಾ ಎಸ್. ಹೊಸಮಠ)**

ದಿನಾಂಕಃ **14.08.2025**

ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು, ಹುಣಸೂರು.